ಹೊಳೆನರಸೀಪುರದಲ್ಲಿ ರೇಷ್ಮೆ ಇಲಾಖೆಯ ಗೈನೇಜ್ ಕಟ್ಟಡವನ್ನು ಪ್ರಾರಂಭಿಸದೇ ಇರುವ ಬಗ್ಗೆ

282 - ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ) : ಮಾನ್ಯ ರೇಷ್ಮೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೊಳೇನರಸೀಪುರದಲ್ಲಿ ರೇಷ್ಮೆ ಇಲಾಖಾವತಿಯಿಂದ ಗೈನೇಟ್ ಕಟ್ಟಡ ಕಟ್ಟಲು ಸರ್ಕಾರ ಆಡಳಿತಾತ್ಮಕ ಮಂಜೂರಾತಿ ನೀಡಿರುವುದು ನಿಜವಲ್ಲವೇ?*

ಆ) *ಈ ಕೆಲಸಕ್ಕಾಗಿ 94-95ರ ಆಯವ್ಯಯದಲ್ಲಿ ಇಟ್ಟಿರುವ ಹಣವೆಷ್ಟು?*

ಇ) *ಮೇಲ್ಕಂಡ ಕಟ್ಟಡದ ಕೆಲಸವನ್ನು ಪ್ರಾರಂಭಿಸಲಾಗಿದೆಯೇ? ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?*

ಈ) *ಸದರಿ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು?*

ಡಾ॥ ಜಿ. ಪರಮೇಶ್ವರ (ರೇಷ್ಮೆ ರಾಜ್ಯ ಸಚಿವರು) :

ಅ) ನಿಜ.

ಆ) ರೂ. 5.00 ಲಕ್ಷಗಳು

ಇ) ಟೆಂಡರ್ ಅನುಮೋದನೆಯಾಗಿದ್ದು ಕಟ್ಟಡ ನಿರ್ಮಾಣ ಕೆಲಸಕ್ಕೆ ಆದೇಶ ನೀಡಲಾಗಿದೆ. ಶೀಘ್ರದಲ್ಲೇ ಪ್ರಾರಂಭಿಸಲಾಗುವುದು.

ಈ) ಕೆಲಸ ಪ್ರಾರಂಭಿಸಿದ ಒಂದು ವರ್ಷದೊಳಗೆ ಕಟ್ಟಡ ನಿರ್ಮಾಣ ಪೂರ್ಣಗೊಳಿಸಲಾಗುವುದು.

ಸುಳ್ಳು ಜಾತಿ ಸರ್ಟಿಫಿಕೇಟ್ ಪಡೆದು, ನೌಕರಿ ಮತ್ತು ವಿದ್ಯಾಭ್ಯಾಸಕ್ಕೆ ಸೇರಿದವರ ಸಂಖ್ಯೆ

319 - ಶ್ರೀ ಕರಿಯಣ್ಣ (ಹೊಳೆಹೊನ್ನೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸೇರಿದವರೆಂಬುದಾಗಿ ತಿಳಿಸಿ ಇದುವರೆಗೆ ಸುಳ್ಳು ಜಾತಿ ಸರ್ಟಿಫಿಕೇಟ್ ಪಡೆದು ಸರ್ಕಾರಿ ನೌಕರಿ ಮತ್ತು ವಿದ್ಯಾಭ್ಯಾಸಕ್ಕೆ ಸೇರಿದವರ ಸಂಖ್ಯೆ ಎಷ್ಟು?*

ಆ) *ಇವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು?*

ಇ) *ಕ್ರಮ ಕೈಗೊಳ್ಳದಿದ್ದಲ್ಲಿ ಕಾರಣಗಳೇನು?*

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) 1981 ರಿಂದ 1994ನೇ ಜುಲೈ ಅಂತ್ಯದವರೆಗೆ 926 ಪ್ರಕರಣಗಳು.

ಆ) ಯಾವುದೇ ವ್ಯಕ್ತಿಯು ಸುಳ್ಳು ಜಾತಿ ಪತ್ರದ ಸಹಾಯದಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಮೀಸಲಿಟ್ಟ ನೌಕರಿಯನ್ನು ಪಡೆದುಕೊಂಡಿರುವುದು ಸಾಬೀತಾದ ಮೇಲೆ ಇಲಾಖಾ ಕ್ರಮವನ್ನು ತೆಗೆದುಕೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ತಿಳಿಸಲಾಗಿದೆ. ಮತ್ತು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದಿಂದ ಭಾರತೀಯ ದಂಡ ಸಂಹಿತೆ 420ರ ಪ್ರಕಾರ ಮೊಕದ್ದಮೆಯನ್ನು ದಾಖಲು ಮಾಡಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ.

ಇ) ಉದ್ಭವಿಸುವುದಿಲ್ಲ.